# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 13/9/20.


# ಶಾಸಕರಿಗೆ ತಮ್ಮ ಕ್ಷೇತ್ರದಲ್ಲಿಯೇ ಸೋಂಕು ಪರೀಕ್ಷೆ

ಉವಾ 13/9/20

**ಬೆಂಗಳೂರು:** ಸೆ. 21 ರಿಂದ ಆರಂಭವಾಗುವ ವಿಧಾನ ಮಂಡಲದ ಅಧಿವೇಶನದಲ್ಲಿ ಪಾಲ್ಗೊಳ್ಳಲು ಶಾಸಕರು ತಮ್ಮ ಕ್ಷೇತ್ರದಲ್ಲಿಯೇ 72 ಗಂಟೆಗಳ ಮುಂಚೆ ಆರ್‌ಟಿಪಿಸಿಆರ್ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಈ ಕುರಿತು ವಿಧಾನಸಭಾ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಎಲ್ಲ ಶಾಸಕರು ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯ ಭಾಸ್ಕರ್ ಅವರಿಗೆ ಪತ್ರ ಬರೆದಿದ್ದಾರೆ. ಶಾಸಕರು ತಮ್ಮ ಕ್ಷೇತ್ರದಲ್ಲಿ ತಪಾಸಣೆ ಮಾಡಿಸಿಕೊಳ್ಳದಿದ್ದರೆ, ಸೆ.18 ರಂದು ವಿಧಾನ ಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ತಪಾಸಣೆ ನಡೆಸುವ ಸಂದರ್ಭದಲ್ಲಿ ಪರೀಕ್ಷೆಗೆ ಒಳಪಡಿಸಿಕೊಳ್ಳಬಹುದು ಎಂದು ತಿಳಿಸಿದ್ದಾರೆ. ವಿಧಾನ ಸಭೆ ಸಚಿವಾಲಯದ ಸಿಬ್ಬಂದಿ, ಸರ್ಕಾರದ ಅಧಿಕಾರಿಗಳು, ಕಲಾಪಕ್ಕೆ ಹಾಜರಾಗುವ ಶಾಸಕರು, ಸಚಿವರ ಆಪ್ತ ಸಿಬ್ಬಂದಿ, ಇಲಾಖೆಯ ಅಧಿಕಾರಿಗಳು ಆರ್‌ಟಿಪಿಸಿಆರ್ ಪರೀಕ್ಷೆ ಮಾಡಿಸಿ ವರದಿಯನ್ನು ತೆಗೆದುಕೊಂಡು ಕಲಾಪಕ್ಕೆ ಬರುವಂತೆ ಪತ್ರದಲ್ಲಿ ತಿಳಿಸಿದ್ದಾರೆ.